ಕರ್ನಾಟಕ ವಿಧಾನ ಸಭೆಯಲ್ಲಿ 1968 ಸೆಪ್ಟೆಂಬರ್, 17 ರಂದು ಹಾಗೂ ದಿನಾಂಕ 1ನೇ ಮಾರ್ಚ್, 1993 ರಂದು ಅಂದಿನ ಮಾನ್ಯ ಸಭಾಧ್ಯಕ್ಷರವರು ನೀಡಿರುವ ತೀರ್ಪುಗಳನ್ನು ಗಮನಿಸಿದ್ದೇನೆ. ಸದನ ನಡೆಯುವಾಗ ಸದನದ ಹೊರಗಡೆ ನೀತಿ ಹೇಳಿಕೆಗಳನ್ನು ನೀಡುವುದರಿಂದ ಹಕ್ಕುಚ್ಯುತಿಯಾಗುವುದಿಲ್ಲವೆಂದು, ಆದರೆ ಇಂತಹ ಹೇಳಿಕೆಗಳು ಸೌಜನ್ಯದ ಉಲ್ಲಂಘನೆಯೆಂದು (Breach of courtesy) ಪರಿಗಣಿಸಲಾಗಿದೆ. ಈ ಹಿನ್ನೆಲೆಯಲ್ಲಿ ಮಾನ್ಯ ಸದಸ್ಯರುಗಳು ನೀಡಿರುವ ಹಕ್ಕುಚ್ಯುತಿ ಸೂಚನೆಯನ್ನು ತಿರಸ್ಕರಿಸಿ ಈ ವಿಷಯವನ್ನು ಇಲ್ಲಿಗೆ ಮುಕ್ತಾಯಗೊಳಿಸಲಾಗಿದೆ.

**ಈಗ ಸದನವನ್ನು ಸೋಮವಾರ ಬೆಳಗ್ಗೆ 11 ಗಂಟೆಗೆ ಸೇರುವಂತೆ ಮುಂದೂಡಲಾಗಿದೆ.**

**(ಸದನವು ಸಂಜೆ 5 ಗಂಟೆ 51 ನಿಮಿಷಕ್ಕೆ ಮುಂದೂಡಲ್ಪಟ್ಟು ದಿನಾಂಕ 27ನೇ ಮಾರ್ಚ್ 2006ರ ಸೋಮವಾರದಂದು ಬೆಳಿಗ್ಗೆ 11.00 ಗಂಟೆಗೆ ಸಮಾವೇಶಗೊಳ್ಳಲು ನಿಶ್ಚಯಿಸಿತು)**

**ಅನುಬಂಧ**

98 (18) ಶ್ರೀ ಅಪ್ಪಾಸಾಹೇಬ್ (ಅಪ್ಪ) ಮಲ್ಲಪ್ಪ ಪಟ್ಟಣಶೆಟ್ಟಿ (ಬಿಜಾಪುರ) (ಕೃಷಿ ಸಚಿವರು) ಈ ಕೆಳಗಿನ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ?

ಅ) ಬಿಜಾಪುರ ಜಿಲ್ಲೆಯು ಕೃಷಿ ಮತ್ತು ತೋಟಗಾರಿಕಾ ಬೆಳೆಗಳನ್ನು ಬೆಳೆಯುವುದರಲ್ಲಿ ಮುಂಚೂಣಿಯಲ್ಲಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೆ?

ಆ) ಬಿಜಾಪುರದಲ್ಲಿ ಕೃಷಿ ಮತ್ತು ತೋಟಗಾರಿಕಾ ಆಧಾರಿತ ಕೈಗಾರಿಕೆಗಳನ್ನು ಸ್ಥಾಪಿಸುವ ಪ್ರಸ್ತಾವನೆಯನ್ನು ಸರ್ಕಾರ ಹೊಂದಿದೆಯೇ?

ಇ) ಹಾಗಿದ್ದಲ್ಲಿ ಅಂತಹ ಯಾವ ಯಾವ ಕೈಗಾರಿಕೆಗಳನ್ನು ಪ್ರಾರಂಭಿಸಲಾಗುವುದು?

ಈ) ಜಾಪುರದಲ್ಲಿರುವ ಕೈಗಾರಿಕಾ ಪ್ರದೇಶದಲ್ಲಿಮೂಲಭೂತ ಸೌಕರ್ಯಗಳಿಲ್ಲದಿರುವುದು ಸರ್ಕಾರ ಮನಗಂಡಿದೆಯೇ;

ಉ) ಹಾಗಿದ್ದಲ್ಲಿ ಮೂಲಭೂತ ಸೌಕರ್ಯಗಳನ್ನು ಯಾವಾಗ ಒದಗಿಸಲಾಗುವುದು;

ಊ) ಬಿಜಾಪುರದಲ್ಲಿ ಕೈಗಾರಿಕೆಗಳ ಸ್ಥಾಪನೆ, ಕೈಗಾರಿಕೆಗಳ ಅಭಿವೃದ್ಧಿಗೆ ಸರ್ಕಾರ ಯಾವ ಯಾವ ಯೋಜನೆಗಳನ್ನು ಹಾಕಿಕೊಂಡಿದೆ?

ಶ್ರೀ ಬಂಡೆಪ್ಪಾ ಕಾಶಂಪೂರ್ (ಮಾನ್ಯ ಕೃಷಿ ಸಚಿವರು):

ಅ) ಹೌದು. Yes

ಆ ಹೌದು. Yes

ಇ) ಕೃಷಿ ಮತ್ತು ತೋಟಗಾರಿಕೆ ಆಧಾರಿತ ಕೈಗಾರಿಕೆಗಳಾದ ಶೀತಲಗೃಹ, ಒಣದ್ರಾಕ್ಷಿ ಉತ್ಪಾದನೆ, ಗ್ರೇವ್ ವೈನ್, ಆಹಾರ ಧಾನ್ಯಗಳ ಸಂಸ್ಕರಣೆ, ಎಣ್ಣೆಮಿಲ್, ಕೃಷಿ ಸಲಕರಣೆ ತಯಾರಿಕೆ,

ಟ್ರಾಕ್ಟರ್ ಟ್ರೈಲರ್‌ಗಳ ತಯಾರಿಕೆ ಇತ್ಯಾದಿ ಘಟಕಗಳನ್ನು ಆರಂಭಿಸುವ ಉದ್ದೇಶ ಹೊಂದಲಾಗಿದೆ. ಬೀಜಾಪುರದಲ್ಲಿ ಕೈಗಾರಿಕಾ ಪ್ರದೇಶದ ಮೂಲಭೂತ ಸೌಕರ್ಯಗಳನ್ನು ಅಭಿವೃದ್ಧಿಪಡಿಸುವುದು, ಕೈಗಾರಿಕೆಗಳ ಸ್ಥಾಪನೆ ಹಾಗೂ ಅಭಿವೃದ್ಧಿಗೆ ವಾಣಿಜ್ಯ ಮತ್ತು ಕೈಗಾರಿಕೆ ಇಲಾಖೆಯು ಕ್ರಮಕೈಗೊಳುವುದು.

99 (40) ಶ್ರೀ ಧ್ರುವನಾರಾಯಣ ಆರ್. (ಸಂತೇಮರಳ್ಳಿ) (ಆಹಾರ, ನಾಗರಿಕ ಸರಬರಾಜು, ಗ್ರಾಹಕರ ವ್ಯವಹಾರಗಳು ಹಾಗೂ ಗ್ರಾಮೀಣ ನೀರು ಸರಬರಾಜು ಸಚಿವರು ಈ ಕೆಳಗಿನ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ?

ಅ. ಚಾಮರಾಜನಗರ ಜಿಲ್ಲೆಯಲ್ಲಿ ಕುಡಿಯುವ ನೀರಿಗೆ ಟಾಸ್ಕ್‌ಫೋರ್ಸ್ ವತಿಯಿಂದ ಮಂಜೂರಾಗಿರುವ ಕ್ರಿಯಾ ಯೋಜನೆಯ ಕಾಮಗಾರಿಗಳಿಗೆ ಸರ್ಕಾರ ಅನುದಾನ ಬಿಡುಗಡೆ ಮಾಡದಿರಲು ಕಾರಣವೇನು;

ಆ. ಅನುದಾನದ ಕೊರತೆ ಏನಾದರೂ ಇದೆಯೇ;

ಇ. ಹಾಗಿಲ್ಲದಿದ್ದಲ್ಲಿ ಸರ್ಕಾರ ಈ ಬಗ್ಗೆ ತೆಗೆದುಕೊಂಡ ಕ್ರಮವೇನು?

ಶ್ರೀ ಗೋವಿಂದ. ಎಂ. ಕಾರಜೋಳ್ (ಆಹಾರ, ನಾಗರಿಕ ಸರಬರಾಜು, ಗ್ರಾಹಕರ ವ್ಯವಹಾರಗಳು ಹಾಗೂ ಗ್ರಾಮೀಣ ನೀರು ಸರಬರಾಜು ಸಚಿವರು) :

ಟಾಸ್ಕ್‌ಫೋರ್ಸ್ ಶೀರ್ಷಿಕೆಯಡಿಯೇ 2005–06 ಸಾಲಿಗೆ ಯಾವುದೇ ಪ್ರತ್ಯೇಕ ಅನುದಾನ ಹಂಚಿಕೆ ಇಲ್ಲದಿರುವುದರಿಂದ ಜುಲೈ 2005ರ ಅಂತ್ಯಕ್ಕೆ ಅನುಷ್ಠಾನಗೊಳಿಸಿರುವ ಅನುಮೋದಿತ ಕಾಮಗಾರಿಗಳ ಕಾಮಗಾರಿಗಳ ಬಾಬ್ತು ಬಿಲ್ ಪಾವತಿಗಾಗಿ ರೂ.552,44 ಲಕ್ಷದ ಬೇಡಿಕೆ ಚಾಮರಾಜನಗರ ಜಿಲ್ಲಾ ಪಂಚಾಯತಿಯಿಂದ ಬಂದಿತ್ತು. ಆದುದರಿಂದ ರಾಜ್ಯ ಮತ್ತು ಕೇಂದ್ರ ವಲಯಗಳಡಿ ಕುಡಿಯುವ ನೀರಿನ ಬಾಬ್ತಿಗಾಗಿ ಪ್ರಸಕ್ತ ಸಾಲಿನಲ್ಲಿ ಬಿಡುಗಡೆಯಾಗಿರುವ ರೂ. 966.00 ಲಕ್ಷ ಅನುದಾನದ ವತಿಯಿಂದ ಸದರಿ ಬಿಲ್ ಪಾವತಿ ಮಾಡಲು ಅನುಮತಿ ನೀಡಲಾಗಿದೆ. ರಾಜ್ಯ ಮತ್ತು ಕೇಂದ್ರ ವಲಯಗಳಡಿ ಬಿಡುಗಡೆಯಾಗಿರುವ ಅನುದಾನದ ಪೈಕಿ ಅನುಮೋದನೆಯಾಗಿ ಸಮರ್ಪಕವಾಗಿ ಪೂರ್ಣಗೊಂಡಿರುವ ಕಾಮಗಾರಿಗಳ ಬಿಲ್ ಪಾವತಿಸಲು ಸ್ಥಳೀಯ ಪಂಚಾಯತ್ ರಾಜ್ ಸಂಸ್ಥೆಗಳು ನಿಯಮಾನುಸಾರ ಕ್ರಮಕೈಗೊಳಗೊಳ್ಳುತ್ತವೆ. ಇದಕ್ಕೆ ಬೇಕಾಗುವು ಅನುದಾನ ನೀಡಲು ಸರಕಾರ ಬದ್ಧವಾಗಿದೆ.

100 (44) ಶ್ರೀ ಧ್ರವನಾರಾಯಣ ಆರ್. (ಸಂತೇಮರಳ್ಳಿ) (ಆಹಾರ, ನಾಗರಿಕ ಸರಬರಾಜು, ಗ್ರಾಹಕರ ವ್ಯವಹಾರಗಳು ಹಾಗೂ ಗ್ರಾಮೀಣ ನೀರು ಸರಬರಾಜು ಸಚಿವರು ಈ ಕೆಳಗಿನ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ?

ಅ. ಸಂತೇಮರಳ್ಳಿ ವಿಧಾನ ಸಭಾ ಕ್ಷೇತ್ರದ ವ್ಯಾಪ್ತಿಗೆ ಬರುವ ದೊಡ್ಡ ಕೌಲಂದೆ ಹೋಬಳಿಗಳಿಗೆ ಸೇರಿದ ಗ್ರಾಮಗಳಿಗೆ ಕುಡಿಯುವ ನೀರಿನ ಸಮಸ್ಯೆ ತೀವ್ರವಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;